


ಮುಖ್ಯಮಂತ್ರಿ @siddaramaiah ಅವರು ಇಂದು ಬೆಂಗಳೂರಿನ ಅರಮನೆ ಮೈದಾನದಲ್ಲಿ ಕನ್ನಡ ಚಳವಳಿಗಾರರ ಸಮಿತಿ ಆಯೋಜಿಸಿದ್ದ ಜನರಾಜ್ಯೋತ್ಸವ -2025 ಅನ್ನು ಉದ್ಘಾಟಿಸಿ, ಕನ್ನಡ ನಾಡು - ನುಡಿಗೆ ಅಪಾರ ಸೇವೆ ಸಲ್ಲಿಸಿರುವ ಹಿರಿಯ ಚಲನಚಿತ್ರ ನಿರ್ಮಾಪಕರಾದ ಸಾ.ರಾ.ಗೋವಿಂದು ಅವರಿಗೆ ಜನರಾಜ್ಯೋತ್ಸವ ಪುರಸ್ಕಾರ ನೀಡಿ ಗೌರವಿಸಿದರು.

ಸಿಎಂ ಸಿದ್ದರಾಮಯ್ಯ ಭರವಸೆ | 'ಜನರಾಜ್ಯೋತ್ಸವ' ಕಾರ್ಯಕ್ರಮ | ಕನ್ನಡ ಹೋರಾಟಗಾರರ ಸಮಿತಿ ಆಯೋಜನೆ

# ಕನ್ನಡ ಹೋರಾಟಗಾರರ ವಿರುದ್ಧದ ಕೇಸ್ ಶೀಘ್ರ ವಾಪಸ್

ವಿಜಯವಾಣಿ ಸುದ್ದಿಜಾಲ ಬೆಂಗಳೂರು

ಕನ್ನಡಕ್ಕಾಗಿ, ನೆಲ ಜಲಕ್ಕಾಗಿ ಹೋರಾಡಿದವರ ವಿರುದ್ಧದ ಪ್ರಕರಣಗಳನ್ನು ಹಿಂಪಡೆಯುವ ಸಂಬಂಧ ಗೃಹ ಸಚಿವರ ನೇತೃತ್ವದಲ್ಲಿ ಸಂಪುಟ ಉಪಸಮಿತಿ ರಚನೆಯಾಗಿದೆ. ಅದರ ಸಭೆಯನ್ನು ಶೀಘ್ರ ಕರೆದು ಪ್ರಕರಣ ವಾಪಸ್ ಪಡೆಯುವ ಕೆಲಸ ಮಾಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ ನೀಡಿದ್ದಾರೆ.

ಭಾನುವಾರ ಅರಮನೆ ಮೈದಾನದಲ್ಲಿ ಕನ್ನಡ ಹೋರಾಟಗಾರರ ಸಮಿತಿ ಆಯೋಜಿಸಿದ್ದ 'ಜನರಾಜ್ಯೋತ್ಸವ' ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ನಾನು ಹಿಂದಿ ಸೇರಿ ಇತರೆ ಭಾಷೆಗಳ ವಿರೋಧಿಯಲ್ಲ, ಬೇರೆ ಭಾಷೆ ಕಲಿಯಬೇಡಿ ಎಂದೂ ಹೇಳುವುದಿಲ್ಲ. ಆದರೆ, ಕನ್ನಡಿಗರಾಗಿರಿ. ಇಲ್ಲಿಗೆ ಬರುವ ಪರರಾಜ್ಯದವರು ಕನ್ನಡಿಗರಾಗಿರಲಿ. ಪರಭಾಷಿಕರಿಗೂ ಕನ್ನಡ ಕಲಿಸುವ ಮೂಲಕ ಕನ್ನಡಿಗರನ್ನಾಗಿ ಮಾಡಬೇಕು. ರಾಜ್ಯದಲ್ಲಿ ಕನ್ನಡದ ವಾತಾವರಣ ನಿರ್ಮಾಣ ಮಾಡಬೇಕಾದುದು ಎಲ್ಲರ ಜವಾಬ್ದಾರಿಯಾಗಿದೆ ಎಂದರು.

ಹೊರರಾಜ್ಯದಿಂದ ಇಲ್ಲಿಗೆ ಬರುವವರಲ್ಲಿ ಕನ್ನಡ ಕಲಿಯದೆ ಬದುಕಬಹುದು ಎಂಬ ಭಾವನೆ ಇದೆ. ಕೇರಳ, ತಮಿಳುನಾಡು, ಆಂಧ್ರ, ತೆಲಂಗಾಣ ಹಾಗೂ ಮಹಾರಾಷ್ಟ್ರಕ್ಕೆ ಹೋದರೆ ಅಲ್ಲಿನ ರಾಜ್ಯ ಭಾಷೆಯಲ್ಲೇ ಮಾತನಾಡುತ್ತಾರೆ. ಅಷ್ಟೇ ಏಕೆ, ಇಬ್ಬರು ತುಳು ಮಾತನಾಡುವವರು ಸೇರಿದರೆ ತುಳುವಿನಲ್ಲಿ ಮಾತನಾಡುತ್ತಾರೆ. ಆದರೆ, ಇಬ್ಬರು ಕನ್ನಡಿಗರು ಮಾತ್ರ ಯಾಕೆ ಕನ್ನಡದಲ್ಲಿ ಮಾತನಾಡುವುದಿಲ್ಲ ಎಂದು ಸಿದ್ದರಾಮಯ್ಯ ಪ್ರಶ್ನಿಸಿದರು.

**ಕನ್ನಡ ಶಾಲೆ ಉಳಿಯಬೇಕು:** ಹಳ್ಳಿಗಳಲ್ಲೂ ಈಗ ಇಂಗ್ಲಿಷ್ ಶಾಲೆಗಳು ಬರುತ್ತಿವೆ. ನಾನು ಕನ್ನಡ ಕಲಿಕೆಯ ಪರವಾಗಿದ್ದೇನೆ. ಈ ವಿಚಾರದಲ್ಲಿ ಪಾಲಕರ ನೆರವೂ ಅಗತ್ಯ. ಕನ್ನಡ ತಜ್ಞರ ಸಭೆ ಕರೆದು ಕನ್ನಡ ಶಾಲೆ ಉಳಿಸುವ ಸಂಬಂಧ ತೀರ್ಮಾನ ಕೈಗೊಳ್ಳಲಾಗುವುದು. ವೈಯಕ್ತಿಕವಾಗಿ ದ್ವಿಭಾಷಾ ನೀತಿ ಪರವಾಗಿದ್ದೇನೆ. ಕ್ಯಾಬಿನೆಟ್‌ನಲ್ಲಿ ಈ ಕುರಿತು ಚರ್ಚಿಸಿ ಕ್ರಮ ವಹಿಸಲಿದ್ದೇವೆ. ಕನ್ನಡಿಗರಿಗೆ ಉದ್ಯೋಗ ವಿಚಾರದಲ್ಲೂ ಸರ್ಕಾರ ನಿರ್ಧಾರ ಕೈಗೊಳ್ಳುವ ಬಗ್ಗೆ ಸಂಪುಟದಲ್ಲಿ ಚರ್ಚೆ ನಡೆಯಲಿದೆ ಎಂದು ತಿಳಿಸಿದರು. ಕನ್ನಡ ಶಾಲೆ ಉಳಿಸುವ ಬಗ್ಗೆ ತಜ್ಞರ ಸಭೆ ಕರೆದು ತೀರ್ಮಾನ ಕೈಗೊಳ್ಳುತ್ತೇವೆ. ರಾಜ್ಯದ ನಾಡು, ನುಡಿ, ನೆಲ ಜಲ ಹಾಗೂ ಕನ್ನಡಿಗರಿಗೆ ಉದ್ಯೋಗ ವಿಚಾರದಲ್ಲಿ ಸರ್ಕಾರ ರಾಜಿಯಾಗುವ ಪ್ರಶ್ನೆಯೇ ಇಲ್ಲ ಎಂದು ಸಿಎಂ ಹೇಳಿದರು.

ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಕರವೇ ರಾಜ್ಯಾಧ್ಯಕ್ಷ ಟಿ.ಎ. ನಾರಾಯಣ ಗೌಡ, ಪ್ರೊ. ಬರಗೂರು ರಾಮಚಂದ್ರಪ್ಪ, ಮೂಡ್ನಾಕೂಡು ಚಿನ್ನಸ್ವಾಮಿ ಮಾತನಾಡಿದರು. ವಿವಿಧ ಸಂಘಟನೆಗಳ ಕನ್ನಡ ಪರ ಹೋರಾಟಗಾರರು ಇದ್ದರು.



ವಿಜಯವಾಣಿ ಚಿತ್ರ

ಅರಮನೆ ಮೈದಾನದಲ್ಲಿ ಕನ್ನಡ ಹೋರಾಟಗಾರರ ಸಮಿತಿ ಆಯೋಜಿಸಿದ್ದ 'ಜನರಾಜ್ಯೋತ್ಸವ' ಕಾರ್ಯಕ್ರಮದಲ್ಲಿ ಸಿಎಂ ಸಿದ್ದರಾಮಯ್ಯ ಅವರನ್ನು ಸನ್ಮಾನಿಸಲಾಯಿತು. ಬಸವರಾಜ ಹೊರಟ್ಟಿ, ಟಿ.ಎ. ನಾರಾಯಣ ಗೌಡ ಮತ್ತಿತರರಿದ್ದರು.

## ಚಳವಳಿಗಾರರ ಸಮಿತಿ ಒತ್ತಾಯ

- ಒಕ್ಕೂಟ ಸರ್ಕಾರದ ತ್ರಿಭಾಷಾ ಸೂತ್ರ ತಿರಸ್ಕರಿಸಬೇಕು.
- ಶೀಘ್ರ ದ್ವಿಭಾಷೆ ನೀತಿ ಜಾರಿಗೆ ತರಬೇಕು.
- ರೈಲ್ವೆ ಸೇರಿ ಎಲ್ಲ ಉದ್ಯೋಗದಲ್ಲಿ ನೇಮಕಾತಿ, ಬಡ್ತಿ ಪರೀಕ್ಷೆಯಲ್ಲಿ ಕನ್ನಡ ಭಾಷೆಗೆ ಅವಕಾಶ ನೀಡಬೇಕು.
- ಐಟಿ-ಬಿಟಿ, ಅಂಗಡಿಗಳು, ವ್ಯಾಪಾರ ಕೇಂದ್ರಗಳ ನಾಮಫಲಕದಲ್ಲಿ ಶೇ.60 ಕನ್ನಡ ಬಳಕೆ ಕಡ್ಡಾಯಗೊಳಿಸಬೇಕು. ಇದನ್ನು ಪಾಲಿಸದವರ ಮೇಲೆ ಕಟ್ಟುನಿಟ್ಟಿನ ಕ್ರಮವಾಗಬೇಕು.
- ರಾಜ್ಯದಲ್ಲಿ ಉದ್ಯೋಗ ಮತ್ತು ಉದ್ಯಮ ಮಾಡುವ ಎಲ್ಲ ಪರಭಾಷಿಗರಿಗೆ ಕನ್ನಡ ಕಲಿಸುವ ಕೆಲಸವಾಗಬೇಕು, ಇದಕ್ಕೆ ನಿಯಮ ರೂಪಿಸಬೇಕು
- ಹೋರಾಟ ಮಾಡುವಾಗ ಕಾರ್ಯಕರ್ತರ ವಿರುದ್ಧ ರೌಡಿಶೀಟ್ ತೆರೆಯಬಾರದು. ದ್ವೇಷ ಭಾಷಣ ಕಾನೂನಿಂದ ಕನ್ನಡ ಹೋರಾಟಗಾರರನ್ನು ಹೊರಗಿಡಬೇಕು.
- ಕನ್ನಡ ಸಂಸ್ಕೃತಿ, ಭಾಷೆ, ಪರಂಪರೆ ಹಾಗೂ ಕನ್ನಡಿಗರಿಗೆ ಅವಮಾನ ಮಾಡುವವರ ವಿರುದ್ಧ ಕಠಿಣ ಕಾನೂನು ರೂಪಿಸುವುದು. ಕನ್ನಡ ಹೋರಾಟಗಾರರ ವಿರುದ್ಧ ಹೋರಾಟ ಪ್ರಕರಣಗಳನ್ನು ಉಲ್ಲೇಖಿಸಿ ಹಾಕಿರುವ ಪ್ರಕರಣಗಳನ್ನು ಹಿಂಪಡೆಯಬೇಕು.

# ‘ದ್ವಿಭಾಷೆ: ಸಂಪುಟದಲ್ಲಿ ಚರ್ಚಿಸಿ ತೀರ್ಮಾನ’

## ‘ಜನರಾಜ್ಯೋತ್ಸವ’ದಲ್ಲಿ ಸಿ.ಎಂ. ಸಿದ್ದರಾಮಯ್ಯ ಭರವಸೆ


ಪ್ರಜಾವಾಣಿ ವಾರ್ತೆ

ಬೆಂಗಳೂರು: ‘ಕರ್ನಾಟಕದಲ್ಲಿ ದ್ವಿಭಾಷಾ ನೀತಿ ಜಾರಿಯಾಗಬೇಕು ಎಂಬುದು ನನ್ನ ವೈಯಕ್ತಿಕ ಬಯಕೆ. ಈ ಬಗ್ಗೆ ಸಚಿವ ಸಂಪುಟ ಸಭೆಯಲ್ಲಿ ಪ್ರಸ್ತಾಪಿಸಿ, ತೀರ್ಮಾನ ತೆಗೆದುಕೊಳ್ಳುತ್ತೇವೆ’ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹೇಳಿದರು.

ಕನ್ನಡ ಚಳವಳಿಗಾರರ ಸಮಿತಿಯು ಭಾನುವಾರ ಆಯೋಜಿಸಿದ್ದ ಜನ ರಾಜ್ಯೋತ್ಸವವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಅದಕ್ಕೂ ಮುನ್ನ ಕನ್ನಡ ಪರ ಹೋರಾಟಗಾರರು, ‘ತ್ರಿಭಾಷಾ ನೀತಿ ರದ್ದುಪಡಿಸಬೇಕು ಮತ್ತು ಕನ್ನಡ ಪರ ಹೋರಾಟಗಾರರ ವಿರುದ್ಧ ದಾಖಲಾಗಿರುವ ಪ್ರಕರಣ ಗಳನ್ನೂ ಹಿಂಪಡೆಯಬೇಕು’ ಎಂದು ಮುಖ್ಯಮಂತ್ರಿ ಅವರಿಗೆ ಮನವಿ ಸಲ್ಲಿಸಿದರು.

ತಮ್ಮ ಮಾತಿನ ವೇಳೆ ಈ ವಿಷಯಗಳನ್ನು ಪ್ರಸ್ತಾಪಿಸಿದ ಸಿದ್ದರಾಮಯ್ಯ ಅವರು, ‘ತ್ರಿಭಾಷಾ ನೀತಿಯ ಮೂಲಕ ಹಿಂದಿ ಹೇರಲಾಗುತ್ತಿದ್ದು, ಅದನ್ನು ತಡೆಯಬೇಕು ಎಂಬುದು ಕನ್ನಡಿಗರ ಬೇಡಿಕೆಯಾಗಿದೆ. ನಾನೂ ಇದರ ಪರವಾಗಿ ಇದ್ದೇನೆ. ಆದರೆ, ಸರ್ಕಾರವು ಏಕಾಏಕಿ ನಿರ್ಧಾರ ಮಾಡಲು ಬರುವುದಿಲ್ಲ. ಸಚಿವ ಸಂಪುಟ ಸಭೆಯಲ್ಲಿ ವ್ಯಕ್ತವಾಗುವ ಅಭಿಪ್ರಾಯದ ಆಧಾರದಲ್ಲಿ ಕ್ರಮ ತೆಗೆದುಕೊಳ್ಳುತ್ತೇವೆ’ ಎಂದು ಹೇಳಿದರು.



ಜನರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಕನ್ನಡ ಪರ ಸಂಘಟನೆಗಳ ಭೈರಪ್ಪ ಹರೀಶ್‌ಕುಮಾರ್, ಟಿ.ಎ.ನಾರಾಯಣಗೌಡ, ಸಾ.ರಾ.ಗೋವಿಂದು, ಪ್ರವೀಣ್ ಕುಮಾರ್ ಶೆಟ್ಟಿ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮನವಿ ಸಲ್ಲಿಸಿದರು. ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಮತ್ತು ಇತರರು ಉಪಸ್ಥಿತರಿದ್ದರು

‘ಕನ್ನಡ ಹೋರಾಟಗಾರರ ವಿರುದ್ಧ ದಾಖಲಾಗಿರುವ ಪ್ರಕರಣಗಳ ಬಗ್ಗೆ ತೀರ್ಮಾನ ತೆಗೆದುಕೊಳ್ಳಲು ಗೃಹ ಸಚಿವ ಜಿ.ಪರಮೇಶ್ವರ ಅವರ ನೇತೃತ್ವದಲ್ಲಿ ಉಪ ಸಮಿತಿ ರಚಿಸಲಾಗಿದೆ. ಅವರೊಂದಿಗೆ ಚರ್ಚಿಸಿ, ಶೀಘ್ರ ಕ್ರಮ ತೆಗೆದುಕೊಳ್ಳುತ್ತೇವೆ’ ಎಂದು ಹೇಳಿದರು.

www.vijaykarnataka.com
www.apps.vijaykarnataka.com
ವಿಜಯ ಕರ್ನಾಟಕ VK

### ಜನ ರಾಜ್ಯೋತ್ಸವ-2025 ಕಾರ್ಯಕ್ರಮ ಉದ್ಘಾಟನೆ | ಸಿಎಂ ಸಿದ್ದರಾಮಯ್ಯ ಭರವಸೆ

# ಮರ್ಯಾದೆಗೇಡು ಹತ್ಯೆ ತಡೆಗೆ ಕಾಯಿದೆ

■ **ವಿಕ ಸುದ್ದಿಲೋಕ** ಬೆಂಗಳೂರು

ಮರ್ಯಾದೆಗೇಡು ಹತ್ಯೆ ತಡೆಯಲು ಕಾಯಿದೆ ರೂಪಿಸಿ ಜಾರಿ ಮಾಡಬೇಕೆಂಬ ಮನವಿ ಕುರಿತು ಪರಿಶೀಲಿಸಿ ಕ್ರಮ ವಹಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಭಾನುವಾರ ಭರವಸೆ ನೀಡಿದರು.

ಕನ್ನಡ ಚಳವಳಿಗಾರರ ಸಮಿತಿ ಅರಮನೆ ಮೈದಾನದಲ್ಲಿ ಆಯೋಜಿಸಿದ್ದ 'ಜನ ರಾಜ್ಯೋತ್ಸವ -2025' ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ''ಮರ್ಯಾದೆಗೇಡು ಹತ್ಯೆ ತಡೆಗೆ ಸರಕಾರ ಕಟ್ಟುನಿಟ್ಟಿನ ಕ್ರಮ ಜರುಗಿಸಲಿದೆ,'' ಎಂದು ಆಶ್ವಾಸನೆ ನೀಡಿದರು. ಮರ್ಯಾದೆಗೇಡು ಹತ್ಯೆ ತಡೆಗೆ ಅಗತ್ಯ ಕಾನೂನು ರೂಪಿಸುವಂತೆ ಶಿವಮೊಗ್ಗದ ಪತ್ರಕರ್ತ ಟೆಲೆಕ್ಸ್ ರವಿಕುಮಾರ್ ಮತ್ತಿತರರು ಮುಖ್ಯಮಂತ್ರಿಗೆ ಪತ್ರ ಬರೆದಿದ್ದರು.

**ಕನ್ನಡ ಶಾಲೆಗಳ ಬಗ್ಗೆ ಸಭೆ:** ''ಸಾಹಿತಿ ಪ್ರೊ. ಬರಗೂರು ರಾಮಚಂದ್ರಪ್ಪ ಮನವಿ ಹಿನ್ನೆಲೆಯಲ್ಲಿ ಕನ್ನಡ ಶಾಲೆಗಳ ಉಳಿವಿನ ಬಗ್ಗೆ ಸಭೆ ಕರೆದು ಸೂಕ್ತ ತೀರ್ಮಾನ ಕೈಗೊಳ್ಳಲಾಗುವುದು. ವೈಯಕ್ತಿಕವಾಗಿ ನಾನು ದ್ವಿಭಾಷಾ ನೀತಿಯ ಪರವಾಗಿದ್ದು, ಸಚಿವ ಸಂಪುಟ ಸಭೆಯಲ್ಲಿ ಈ ಬಗ್ಗೆ ಪ್ರಸ್ತಾಪಿಸಿ ಸರಕಾರ ತೀರ್ಮಾನ ಕೈಗೊಳ್ಳಲಿದೆ,'' ಎಂದರು.

''ಪೋಷಕರ ಸಹಾಯವಿಲ್ಲದೆ ಹೋದರೆ ಕನ್ನಡ ಶಾಲೆಗಳು ಉಳಿಯುವುದು ಅಥವಾ ಬೆಳೆಯುವುದು ಕಷ್ಟ. ಪ್ರತಿ ಹಳ್ಳಿಯಲ್ಲಿಯೂ ಕನ್ನಡ ಶಾಲೆ ಇರಬೇಕೆಂದು ಬರಗೂರ ಮನವಿ ಮಾಡಿದ್ದಾರೆ. ನಾನೂ ಕನ್ನಡ ಶಾಲೆ, ಕನ್ನಡ ಮಾಧ್ಯಮದ ಪರವಾಗಿ ಇರುವವನು,'' ಎಂದರು.



ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಸನ್ಮಾನಿಸಲಾಯಿತು.

**ಹಿಂದಿ ರಾಷ್ಟ್ರ ಭಾಷೆ ಅಲ್ಲ:** ''ಕನ್ನಡಿಗರು ಒಂದು ವರ್ಷಕ್ಕೆ ನಾಲ್ಕೂವರೆ ಲಕ್ಷ ಕೋಟಿ ರೂ. ತೆರಿಗೆ ಕಟ್ಟುತ್ತೇವೆ. ಒಂದು ರೂಪಾಯಿ ಕೊಟ್ಟರೆ ಕೇಂದ್ರದಿಂದ ನಮಗೆ ಬರುವುದು 14 ಪೈಸೆ ಮಾತ್ರ. ದೇಶದಲ್ಲಿಯೇ ಕರ್ನಾಟಕ ತಲಾದಾಯದಲ್ಲಿ ನಂಬರ್ ಒನ್ ಸ್ಥಾನದಲ್ಲಿದೆ. ನಮ್ಮ ಸರಕಾರದ ಅನೇಕ ಕಾರ್ಯಕ್ರಮಗಳ ಮೂಲಕ ಈ ಸ್ಥಾನಕ್ಕೆ ಬಂದಿದ್ದೇವೆ. ರಾಜ್ಯ ಸರಕಾರ ಹಿಂದಿಯನ್ನು ವಿರೋಧಿಸುವುದಿಲ್ಲ, ಆದರೆ ಹಿಂದಿ ನಮ್ಮ ರಾಷ್ಟ್ರ ಭಾಷೆ ಅಲ್ಲ,'' ಎಂದರು.

''ರಾಜ್ಯದಲ್ಲಿ ಕನ್ನಡ ಕಲಿಯದೆಯೇ ಬದುಕಬಹುದಾದ ವಾತಾವರಣವಿದೆ. ಕನ್ನಡ ಕಲಿಯಲೇಬೇಕಾದ ಅನಿವಾರ್ಯತೆ ಇಲ್ಲ. ಹೀಗಾಗಿ, ಬೇರೆ ಭಾಷೆಯಲ್ಲಿ ಮಾತನಾಡುವವರೊಂದಿಗೆ ನಾವು ಕನ್ನಡದಲ್ಲಿಯೇ ಮಾತನಾಡಬೇಕು. ತಮಿಳು ನಾಡು, ತೆಲಂಗಾಣ, ಕೇರಳ, ಮಹಾರಾಷ್ಟ್ರ ಹಾಗೂ ಆಂಧ್ರದಲ್ಲಿ ಅವರವರ ಭಾಷೆಯಲ್ಲಿಯೇ ಮಾತನಾಡುತ್ತಾರೆ. ಕನ್ನಡಿಗರು ಏಕೆ ಕನ್ನಡದಲ್ಲಿ ಮಾತನಾಡಬಾರದು? ಕನ್ನಡದಲ್ಲಿಯೇ ಮಾತನಾಡಬೇಕು. ಅನಿವಾರ್ಯವಾದರೆ ಬೇರೆ ಭಾಷೆ ಬಳಸಿ, ಯಾವ ಭಾಷೆ ಕಲಿತರೂ ಕನ್ನಡಿಗರಾಗಿಯೇ ಉಳಿಯಬೇಕು,'' ಎಂದರು.

**ಪ್ರಕರಣ ವಾಪಸ್ ಬಗ್ಗೆ ಚರ್ಚೆ:** ''ಕನ್ನಡ ಚಳವಳಿಗಾರರ ವಿರುದ್ಧದ ಪ್ರಕರಣಗಳನ್ನು ಹಿಂಪಡೆಯುವ ಬಗ್ಗೆ ಉಪಸಮಿತಿ ರಚಿಸಲಾಗಿದ್ದು, ಗೃಹ ಸಚಿವರು ಅದರ ಅಧ್ಯಕ್ಷರಾಗಿದ್ದಾರೆ. ಅವರೊಂದಿಗೆ ಚರ್ಚಿಸಿ ತೀರ್ಮಾನ ಮಾಡಲಾಗುವುದು,'' ಎಂದು ಸಿಎಂ ಆಶ್ವಾಸನೆ ನೀಡಿದರು.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಸಾಹಿತಿ ಬರಗೂರು ರಾಮಚಂದ್ರಪ್ಪ, ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಪುರುಷೋತ್ತಮ ಬಿಳಿಮಲೆ, ಕರ್ನಾಟಕ ರಕ್ಷಣಾ ವೇದಿಕೆ ಅಧ್ಯಕ್ಷ ಟಿ.ಎ. ನಾರಾಯಣಗೌಡ, ಡಾ. ರಾಜ್‌ಕುಮಾರ್ ಅಭಿಮಾನಿಗಳ ಸಂಘದ ಅಧ್ಯಕ್ಷ ಸಾ.ರಾ. ಗೋವಿಂದು, ಸಾಮಾಜಿಕ ಹೋರಾಟಗಾರ್ತಿ ಕೆ.ನೀಲಾ ಮೊದಲಾದವರು ಉಪಸ್ಥಿತರಿದ್ದರು.

## ಕನಡಿಗರಿಗೆ ಮೀಸಲು, ಚರ್ಚಿಸಿ ತೀರ್ಮಾನ

ಕನ್ನಡಿಗರಿಗೆ ಉದ್ಯೋಗದಲ್ಲಿ ಮೀಸಲು ನೀಡುವ ಬಗ್ಗೆ ಸಚಿವ ಸಂಪುಟದಲ್ಲಿ ಚರ್ಚಿಸಿ ಕನ್ನಡಪರ ತೀರ್ಮಾನ ಮಾಡಲಾಗುವುದು. ಕರ್ನಾಟಕದಲ್ಲಿ ಕನ್ನಡಿಗರಿಗೆ ಉದ್ಯೋಗ ಸಿಗಬೇಕು. ರಾಜ್ಯದಲ್ಲಿ ಕನ್ನಡದ ವಾತಾವರಣ ನಿರ್ಮಿಸಬೇಕು. ಕರ್ನಾಟಕಕ್ಕೆ ಅನ್ಯಾಯವಾದಾಗ ಒಗ್ಗಟ್ಟಿನಿಂದ ಹೋರಾಡಬೇಕು. ಕನ್ನಡಿಗರು ಯಾವುದಕ್ಕೂ ಕಡಿಮೆಯಿಲ್ಲ. ಕನ್ನಡ ಭಾಷೆ, ನೆಲ, ಜಲ, ಗಡಿಗಳ ರಕ್ಷಣೆಗೆ ಪಣ ತೊಡೋಣ ಎಂದು ಸಿಎಂ ಕರೆ ನೀಡಿದರು.

## ಇಂದು ಎಐ ಕಾರ್ಯಾಗಾರ

**ಬೆಂಗಳೂರು:** ದಯಾನಂದ ಸಾಗರ್ ವಿಶ್ವವಿದ್ಯಾಲಯವು 'ಉನ್ನತ ಶಿಕ್ಷಣದಲ್ಲಿ ಕೃತಕ ಬುದ್ಧಿಮತ್ತೆ ಅಳವಡಿಕೆ: ವಿಕಸಿತ ಭಾರತ-2047ರ ದಿಕ್ಸೂಚಿ' ಕುರಿತು ಡಿ. 29ರಂದು ಕಾರ್ಯಾಗಾರ ಹಮ್ಮಿಕೊಂಡಿದೆ.

ಹಾರೋಹಳ್ಳಿಯ ಕ್ಯಾಂಪಸ್‌ನಲ್ಲಿ ಬೆಳಗ್ಗೆ 9.30ರಿಂದ ಕಾರ್ಯಕ್ರಮ ನಡೆಯಲಿದೆ. 4 ಪ್ರಮುಖ ವಿಷಯಗಳ ಕುರಿತು ದೇಶದ ತಂತ್ರಜ್ಞರು ವಿಚಾರ ಮಂಡಿಸಲಿದ್ದಾರೆ.

ದಯಾನಂದ ಸಾಗರ್ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಬಿ.ಎಸ್. ಸತ್ಯನಾರಾಯಣ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಪುಣೆಯ ಗ್ರೀನ್ ಟೆರ್ರಿ ಫೌಂಡೇಶನ್ ಸಂಸ್ಥಾಪಕ ನಿರ್ದೇಶಕ ಡಾ. ರಾಜೇಂದ್ರ ಶಿಂಧೆ ದಿಕ್ಸೂಚಿ ಭಾಷಣ ಮಾಡಲಿದ್ದಾರೆ. ಡಿಸಿಯುನ ಸಲಹೆಗಾರ ಕೆ. ಜಯರಾಜ್, ಅರಣ್ಯ ಇಲಾಖೆ ಪ್ರಧಾನ ಕಾರ್ಯದರ್ಶಿ ಡಾ. ಶ್ರೀನಿವಾಸಲು ಉಪಸ್ಥಿತರಿರಲಿದ್ದಾರೆ.

ಸಂಜೆ 5.15ಕ್ಕೆ ಸಮಾರೋಪ ಸಮಾರಂಭ ನಡೆಯಲಿದ್ದು, ಸಮ್ಮೇಳನದ ಸಂಚಾಲಕ ಡಾ. ಸುಧೀಂದ್ರ ರಾವ್ ಮುಖ್ಯ ಅತಿಥಿಯಾಗಿ ಆಗಮಿಸಲಿದ್ದಾರೆ. ಇದೇ ವೇಳೆ ಎಐಸಿಟಿಇ ಮಾಜಿ ಅಧ್ಯಕ್ಷ ಪ್ರೊ. ಟಿ.ಜಿ. ಸೀತಾರಾಮ್ ಅವರು ಎಐ ಕುರಿತು ಬರೆದ ಮೂರು ಪುಸ್ತಕಗಳು ಲೋಕಾರ್ಪಣೆಗೊಳ್ಳಲಿವೆ. ಸಮ್ಮೇಳನದ ಅಧ್ಯಕ್ಷ ಡಾ. ರಾಜೇಂದ್ರ ಶಿಂಧೆ ಸಮಾರೋಪ ಭಾಷಣ ಮಾಡಲಿದ್ದಾರೆ ಎಂದು ಡಿಸಿಯು ಪ್ರಕಟಣೆ ತಿಳಿಸಿದೆ.